ನಡುವನಹಳ್ಳಿ ಕೆರೆ, ಜೆ.ಸಿ.ಪುರ ಕೆರೆ ಮುಖಾಂತರ ನೀರು ಹರಿಸುವ ರೂ.25.00 ಕೋಟಿಗಳ ಯೋಜನೆಯ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಯೋಜನೆಗೆ ಅನುಮೋದನೆಯಾದ ನಂತರ ಕಾವೇರಿ ನೀರಾವರಿ ನಿಗಮದ ಆಯವ್ಯಯದಲ್ಲಿ ಒಳಪಡಿಸಲು ಕ್ರಮ ಕೈಗೊಳ್ಳಲಾಗುವುದು.

960 ಶ್ರೀ ವರ್ತೂರು ಆರ್.ಪ್ರಕಾಶ್ : ಮಾನ್ಯ ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೋಲಾರ ಜಿಲ್ಲೆಯಲ್ಲಿ ಅಂತರಜಲದ ಮಟ್ಟ ದಿನೇ ದಿನೇ ಕುಸಿಯುತ್ತಿದ್ದು, ಸುಮಾರು ಸಾವಿರ ಅಡಿ ಬೋರ್‌ವೆಲ್ ಕೊರೆದರೆ ಮಾತ್ರ ನೀರು ಸಿಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) 1 ಸಾವಿರ ಅಡಿ ಕೊಳವೆ ಬಾವಿ ಕೊರೆಸಿದರೆ ಪಂಪ್‌ಸೆಟ್ ಅಳವಡಿಸಲು ಸುಮಾರು 3 ಲಕ್ಷ ರೂಪಾಯಿ ತಗಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಅನುಸೂಚಿತ ಜಾತಿ/ಅನುಸೂಚಿತ ಪಂಗಡ ಹಾಗೂ ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಪಂಪ್‌ಸೆಟ್ ಅಳವಡಿಸಲು 1 ಲಕ್ಷ ರೂ.ಗಳನ್ನು ಮಾತ್ರ ನೀಡುತ್ತಿದ್ದು, ಉಳಿದ 3 ಲಕ್ಷ ಭರಿಸಲು ಸಣ್ಣ ರೈತರಿಗೆ ಆಗುತ್ತಿರುವ ತೊಂದರೆಯನ್ನು ನಿವಾರಿಸಲು ಸರ್ಕಾರ ಯಾವ ಕ್ರಮ ತೆಗೆದುಕೊಂಡಿದೆ?

ಶ್ರೀ ಗೋವಿಂದ ಎಂ.ಕಾರಜೋಳ (ಸಣ್ಣ ನೀರಾವರಿ, ಯೋಜನೆ ಹಾಗೂ ಸಾಂಖ್ಯಿಕ ಸಚಿವರು) :

ಅ) ಬಂದಿದೆ.

ಆ) ಬಂದಿರುವುದಿಲ್ಲ.

ಇ) ರೂ.2.00 ಲಕ್ಷ ಘಟಕ ವೆಚ್ಚಮಿತಿಯಲ್ಲಿ ಕೊಳವೆ ಬಾವಿ ಕೊರೆದು, ಪಂಪ್‌ಸೆಟ್ ಅಳವಡಿಸಿ ವಿದ್ಯುದ್ದೀಕರಣಗೊಳಿಸಲು ಸಾಧ್ಯವಾಗುವುದರಿಂದ ಘಟಕ ವೆಚ್ಚ ಪುನರ್ ನಿಗದಿಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.